# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಂದಾಯ ಅಧಿಕಾರಿಗಳ ಕಛೇರಿ, ಹೊರಮಾವು ಉಪ ವಲಯ, ಮಹದೇವಪುರ ವಲಯ ಬೆಂಗಳೂರು-43.

ಸಂಖ್ಯೆ.ಬಿಬಿಎಂಪಿ/ಸಕಂಅಹೊಉವ/(ಸಿಬ್ಬಂದಿ)ಪಿಆರ್/ 19 /2022-23 ದಿನಾಂಕ: 03.09.2022

*ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35 2020-21 ದಿನಾಂಕ:21/09/2020 ಹಾಗೂ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವ ದಿನಾಂಕ:-03.09.2022 ರಂದು ಹೊರಮಾವು ಉಪ-ವಿಭಾಗದ ರಾಮಮೂರ್ತಿನಗರ ವಾರ್ಡ್-84ರ ಕಛೇರಿಯ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.*

ಉಪಸ್ಥಿತರು:

| ಕ್ರ.ಸಂ | ಹೆಸರು | ಹುದ್ದೆ | ಮೊ.ನಂ |
|---|---|---|---|
| 1 | ಶ್ರೀ.ಬಸವರಾಜ್ ಚಾರಿ | ನೋಡಲ್ ಅಧಿಕಾರಿ ವಾರ್ಡ್ ನಂ-84 | |
| 2 | ಶ್ರೀ. ಚಂದ್ರಶೇಖರ್ | ಸಹಾಯಕ ಕಾರ್ಯಪಾಲಕ ಅಭಿಯಂತರರು | 9844587466 |
| 3 | ಶ್ರೀ. ದೊಡ್ಡ ಶಾಮಚಾರಿ | ಸಹಾಯಕ ಕಂದಾಯ ಅಧಿಕಾರಿ | 9480685868 |
| 4 | ಶ್ರೀ.ವಿಕ್ರಮ್ ಸಜ್ಜನ್ ಶೆಟ್ಟಿ | ಸಹಾಯಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿ ವಾರ್ಡ್ ನಂ-84 | 9739838297 |
| 5 | ಶ್ರೀ. ವಿಶ್ವನಾಥ್, | ಆರೋಗ್ಯ ಅಧಿಕಾರಿಗಳು, ವಾರ್ಡ್ ಸಂಖ್ಯೆ.84, | 9916609413 |
| 6 | ಶ್ರೀ ವೀರೇಶ್ | ಬೆಸ್ಕಾಂ ಕಿರಿಯ ಅಭಿಯಂತರರು | 9449869317 |
| 7 | ಶ್ರೀ ಆನಂದ | ಬಿ.ಡ್ಲ್ಯೂ.ಡ್ಲ್ಯೂ.ಎಸ್.ಎಸ್.ಬಿ ಕಿರಿಯ ಅಭಿಯಂತರರು | 7090216187 |
| 8 | ಶ್ರೀ. ಚಂದ್ರಕಲಾ | ಕಿರಿಯ ಆರೋಗ್ಯ ಪರಿವೀಕ್ಷಕರು | 9620101648 |
| 9 | ಶ್ರೀ. ಜಯರಾಮ್, | ಕಂದಾಯ ಅಧಿಕಾರಿ | 9663954692 |
| 10 | ಶ್ರೀ.ನಾರಯಣಸ್ವಾಮಿ | ಕಂದಾಯ ಅಧಿಕಾರಿ | 9880817752 |
| 11 | ಶ್ರೀ.ಚಿಟ್ಟಿಬಾಬು, ಸಹಾಯಕರು, | ಅರಣ್ಯ ಬಿ.ಬಿ.ಎಂ.ಪಿ | 9945430665 |
| | | ಸಾರ್ವಜನಿಕರು | |
| 12 | ಶ್ರೀ.ನಂಜಪ್ಪ | ಸರ್.ಎಂ.ವಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್ | – |
| 13 | ಉಷಾ | ಆದಿತ್ಯ ಬಡಾವಣೆ | – |
| 14 | ಜೈ ಕುಮಾರ್ | ಕಾಮದೇನು ಬಡಾವಣೆ | – |
| 15 | ಶೈಲೇಂದ್ರ | ರಾಮಮೂರ್ತಿನಗರ | – |

ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.84 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-

ಶ್ರೀ.ನಂಜಪ್ಪ ಸರ್.ಎಂ.ವಿ ನಗರ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್:-
ರವರು ಮಾತನಾಡಿ ಸರ್.ಎಂ.ವಿ.ನಗರದ 18ನೇ ಅಡ್ಡರಸ್ತೆಯಲ್ಲಿ ಮಳೆ ಬಂದಾಗ ಮನೆಗಳಿಗೆ ನೀರು ನುಗ್ಗುತ್ತಿದ್ದು, ಚರಂಡಿಯ ಅವಶ್ಯಕತೆ ಕೂಡಲೇ ಹೊಸ ಚರಂಡಿಯ ನಿರ್ಮಿಸಿಕೊಡುವುದಾಗಿ ಕೋರಿರುತ್ತಾರೆ.

ಕ್ರಮ:- ವಾರ್ಡ್ ಸಂಖ್ಯೆ 84 ರ ಸಹಾಯಕ ಅಭಿಯಂತರರಿಗೆ ಕೂಡಲೇ ಸ್ಥಳ ಪರಿಶೀಲಿಸಿ ಕ್ರಮವಹಿಸಲು ಸಭೆಯು ಸೂಚಿಸಲಾಯಿತು.

ಶ್ರೀ. ಜೈ ಕುಮಾರ ಕಾಮದೇನು ಬಡಾವಣೆ ಬಡಾವಣೆ :- ರವರು ಮಾತನಾಡಿ, ಕಾಂಕ್ರೀಟ್ ರಸ್ತೆಯನ್ನು ಮಾಡಿಕೊಡುವುದಾಗಿ ತಿಳಿಸಿದರು.

ಕ್ರಮ:- ಸಹಾಯಕ ಅಭಿಯಂತರರು, ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಶೈಲೇಂದ್ರ ರಾಮಮೂರ್ತಿನಗರ ನಿವಾಸಿ ರವರು ಮಾತನಾಡಿ ರಾಮಮೂರ್ತಿನಗರ ರಸ್ತೆ ಬದಿಯಲ್ಲಿ, ಬೀದಿ ಬದಿ ವ್ಯಾಪಾರಿಗಳು ಈಗಾಗಲೇ ರಸ್ತೆಯನ್ನು ಆವರಿಸಿಕೊಂಡಿದ್ದು, ಕೂಡಲೇ ಸಂಬಂಧ ಪಟ್ಟ ಅಧಿಕಾರಿಗಳು ಬೀದಿ ಬದಿ ಅಂಗಡಿಗಳನ್ನು ತೆರವು ಕಾರ್ಯಾಚರಣೆ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ಕ್ರಮ:- ವಾರ್ಡ್ ಸಂಖ್ಯೆ 84 ರ ಸಹಾಯಕ ಅಭಿಯಂತರರು ಸಭೆಗೆ ತಿಳಿಸಿ ಕೂಡಲೇ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಶ್ರೀಮತಿ.ಉಷಾ, ಆದಿತ್ಯ ಬಡಾವಣೆ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್:-
ರವರು ಮಾತನಾಡಿ , ಮನೆಯ ಮುಂದೆ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಿದ್ದು, ಮಳೆ ಬಂದಾಗ ರಸ್ತೆಯಲ್ಲಿ ನೀರು ನಿಂತು ಮನೆಯ ಹೊಳಗಡೆ ಬರುತ್ತಿದ್ದು ಕೂಡಲೇ ಸೂಕ್ತ ಪರಿಹಾರ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ಕ್ರಮ:- ವಾರ್ಡ್ ಸಂಖ್ಯೆ 84 ರ ಸಹಾಯಕ ಅಭಿಯಂತರರು ಸಭೆಗೆ ತಿಳಿಸಿ ಕೂಡಲೇ ಕ್ರಮ ವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ರವರು ಸಭೆಯಲ್ಲಿ ನುರಿತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ದಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ-84
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಶ್ರೀ.ವಿಕ್ರಮ್ ಸಜ್ಜನ್ ಶೆಟ್ಟಿ
ಸಹಾಯಕ ಅಭಿಯಂತರರು
ರಾಮಮೂರ್ತಿನಗರ ವಾರ್ಡ್